ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೊಂದನೆಯ ಅಧಿವೇಶನ

ಸೋಮವಾರ, ದಿನಾಂಕ : 21 ನೇ ಸೆಪ್ಟೆಂಬರ್, 2020

ಮಹಿಳಾ ಕಾರ್ಮಿಕರಿಗೆ ವನಿತಾ ಸಂಗಾತಿ ಯೋಜನೆಯಡಿ ಮಾಸಿಕ ಬಸ್ ಪಾಸ್ ವಿತರಣೆ

ಶ್ರೀ ಎಂ. ನಾರಾಯಣಸ್ವಾಮಿ(ಸ್ಥಳೀಯ ಸಂಸ್ಥೆಗಳ ಕ್ಷೇತ್ರ) -

77 (128) ಮಾನ್ಯ ಕಾರ್ಮಿಕ ಹಾಗೂ ಸಕ್ಕರೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ -

(ಅ) 2020-21ನೇ ಸಾಲಿನ ಆಯವ್ಯಯದಲ್ಲಿ ಘೋಷಣೆ ಮಾಡಿದಂತೆ ಗಾರ್ಮೆಂಟ್ಸ್ ಕಾರ್ಖಾನೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಒಂದು ಲಕ್ಷ ಮಹಿಳಾ ಕಾರ್ಮಿಕರಿಗೆ "ವನಿತಾ ಸಂಗಾತಿ" ಯೋಜನೆಯಡಿ ಮಾಸಿಕ ಬಸ್ ಪಾಸ್‌ಗಳನ್ನು ಕಾರ್ಖಾನೆಯ ಮಾಲೀಕರು ಮತ್ತು ಬೆಂಗಳೂರು ಮಹಾನಗರ ಸಾರಿಗೆ ಸಹಯೋಗದೊಂದಿಗೆ ಒದಗಿಸಲು ಉದ್ದೇಶಿಸಿದ್ದು, ಇದನ್ನು ಜಾರಿಗೊಳಿಸಲಾಗಿದೆಯೇ;

(ಆ) ಜಾರಿಗೊಳಿಸಿದ್ದಲ್ಲಿ, ಎಷ್ಟು ಜನ ಮಹಿಳಾ ಕಾರ್ಮಿಕರು ಇದರ ಪ್ರಯೋಜನ ಪಡೆದಿದ್ದಾರೆ;

(ಇ) ಈ ಯೋಜನೆ ಇನ್ನು ಪ್ರಾರಂಭಿಸದೇ ಇದ್ದಲ್ಲಿ ಯಾವಾಗ ಆರಂಭಿಸಲಾಗುವುದು; ವಿಳಂಬಕ್ಕೆ ಕಾರಣಗಳೇನು?